ಕರ್ನಾಟಕ ಕೃಷಿ ಮತ್ತು ಗ್ರಾಮೀಣ ಅಭಿವೃದ್ಧಿ ಬ್ಯಾಂಕುಗಳು

939 (1066) ಶ್ರೀ ಕೆ.ಪಿ. ಬಚ್ಚೇಗೌಡ (ಚಿಕ್ಕಬಳ್ಳಾಪುರ) : ಮಾನ್ಯ ಸಹಕಾರ ಮತ್ತು ಕೃಷಿ ಮಾರುಕಟ್ಟೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಚಿಕ್ಕಬಳ್ಳಾಪುರ ನಗರವು ಜಿಲ್ಲಾ ಕೇಂದ್ರವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಹಾಗಿದ್ದಲ್ಲಿ ಈ ಭಾಗದ ರೈತರು ಕರ್ನಾಟಕ ರಾಜ್ಯ ಸಹಕಾರಿ ಕೃಷಿ ಹಾಗೂ ಗ್ರಾಮೀಣ ಅಭಿವೃದ್ಧಿ ಬ್ಯಾಂಕ್ ಶಾಖೆ ಕಛೇರಿಗೆ ಕೋಲಾರಕ್ಕೆ ಪ್ರತಿನಿತ್ಯ ಹೋಗಿ ಬರುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಇ) ಹಾಗಿದ್ದಲ್ಲಿ ಚಿಕ್ಕಬಳ್ಳಾಪುರ ಜಿಲ್ಲೆಯ ರೈತರ ಅನುಕೂಲಕ್ಕಾಗಿ ರಾಜ್ಯ ಸಹಕಾರಿ ಕೃಷಿ ಮತ್ತು ಗ್ರಾಮೀಣ ಅಭಿವೃದ್ಧಿ ಬ್ಯಾಂಕ್ ಶಾಖಾ ಕಛೇರಿಯನ್ನು ಚಿಕ್ಕಬಳ್ಳಾಪುರ ಜಿಲ್ಲೆಯಲ್ಲಿ ತೆರೆಯುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ?

ಈ) ಹಾಗಿದ್ದಲ್ಲಿ ಯಾವಾಗ ಶಾಖಾ ಕಛೇರಿಯನ್ನು ತೆರೆಯಲಾಗುವುದು?

ಉ) ಇಲ್ಲವಾಗಿದ್ದಲ್ಲಿ ಚಿಕ್ಕಬಳ್ಳಾಪುರದಲ್ಲಿ ಕರ್ನಾಟಕ ರಾಜ್ಯ ಸಹಕಾರ ಕೃಷಿ ಮತ್ತು ಗ್ರಾಮೀಣ ಅಭಿವೃದ್ಧಿ ಬ್ಯಾಂಕ್ ಶಾಖಾ ಕಛೇರಿಯನ್ನು ತೆರೆಯಲು ಸರ್ಕಾರಕ್ಕಿರುವ ತೊಂದರೆಗಳೇನು? (ವಿವರಗಳನ್ನು ನೀಡುವುದು)?

ಶ್ರೀ ಲಕ್ಷ್ಮಣ ಸ. ಸವದಿ (ಸಹಕಾರ ಮತ್ತು ಕೃಷಿ ಮಾರುಕಟ್ಟೆ ಸಚಿವರು):

ಅ) ಹೌದು.

ಆ) ಗಮನಕ್ಕೆ ಬಂದಿದೆ.

ಇ) ಚಿಕ್ಕಬಳ್ಳಾಪುರ ಜಿಲ್ಲೆಯ ರೈತರ ಅನುಕೂಲಕ್ಕಾಗಿ ಚಿಕ್ಕಬಳ್ಳಾಪುರದಲ್ಲಿ ಶಾಖಾ ಕಛೇರಿಯನ್ನು ತೆರೆಯುವ ಪ್ರಸ್ತಾವನೆ ಕಸ್ಕಾರ್ಡ್ ಬ್ಯಾಂಕಿನ ಮುಂದೆ ಇರುತ್ತದೆ.

ಈ) ಮಾನವ ಸಂಪನ್ಮೂಲ ಕೊರತೆ ಹಾಗೂ ಚಿಕ್ಕಬಳ್ಳಾಪುರದಲ್ಲಿ ಶಾಖೆ ತೆರೆದಲ್ಲಿ ನಿರ್ವಹಣಾ ವೆಚ್ಚ ಭರಿಸಲು ಕಷ್ಟ ಸಾಧ್ಯವಿರುವುದರಿಂದ ಕಸ್ಕಾರ್ಡ್ ಬ್ಯಾಂಕು ಹಾಗೂ ಚಿಕ್ಕಬಳ್ಳಾಪುರ ಜಿಲ್ಲೆಯ ಪಿಕಾರ್ಡ್ ಬ್ಯಾಂಕುಗಳ

ಸಾಲ ವಸೂಲಾತಿ ಮತ್ತು ಸಾಲ ವಿತರಣೆಗಳ ಪರಿಸ್ಥಿತಿ ಸುಧಾರಿಸಿದ ನಂತರ ಶಾಖಾ ಕಛೇರಿ ಪ್ರಾರಂಭಿಸಲು ಕ್ರಮ ಕೈಗೊಳ್ಳಲಾಗುವುದು.

ಉ) ಈ ದಿಶೆಯಲ್ಲಿ ಸರ್ಕಾರದ ಕ್ರಮದ ಅವಶ್ಯವಿರುವುದಿಲ್ಲ.

ಕುಡಿಯುವ ನೀರು ಪೂರೈಕೆ

940 (1067) ಶ್ರೀ ಕೆ.ಪಿ. ಬಚ್ಚೇಗೌಡ (ಚಿಕ್ಕಬಳ್ಳಾಪುರ) : ಮಾನ್ಯ ನಗರಾಭಿವೃದ್ಧಿ, ಕಾನೂನು ಮತ್ತು ಸಂಸದೀಯ ವ್ಯವಹಾರ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಚಿಕ್ಕಬಳ್ಳಾಪುರ ನಗರಕ್ಕೆ ಕುಡಿಯುವ ನೀರು ಪೂರೈಸುವ ಜಕ್ಕಲಮಡಗು ಜಲಾಶಯ ನಿರ್ಮಾಣದ ಕಾಮಗಾರಿಯು ನಿಧಾನಗತಿಯಲ್ಲಿ ಸಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ, ಈ ಕಾಮಗಾರಿಯ ವಿಳಂಬಕ್ಕೆ ಕಾರಣಗಳೇನು ಹಾಗೂ ಈ ಕಾಮಗಾರಿಗಳನ್ನು ಪೂರ್ಣಗೊಳಿಸಲು ಸರ್ಕಾರಕ್ಕಿರುವ ತೊಂದರೆಗಳೇನು;

ಇ) ಹಾಗಿದ್ದಲ್ಲಿ, ಕಾಮಗಾರಿಯನ್ನು ತ್ವರಿತವಾಗಿ ಪೂರ್ಣಗೊಳಿಸಲು ಸರ್ಕಾರ ಕ್ರಮ ಕೈಗೊಳ್ಳುವುದೆ;

ಈ) ಮುಂದಿನ ಬೇಸಿಗೆಗೆ ಚಿಕ್ಕಬಳ್ಳಾಪುರ ನಗರಕ್ಕೆ ಕುಡಿಯುವ ನೀರಿಗೆ ಸರ್ಕಾರ ಪರ್ಯಾಯ ವ್ಯವಸ್ಥೆಯನ್ನೇನಾದರೂ ರೂಪಿಸಿದೆಯೇ;

ಉ) ಈ ಕಾಮಗಾರಿಯನ್ನು ಕೈಗೆತ್ತಿ ಕೊಂಡಿರುವ ಗುತ್ತಿಗೆದಾರರು ಯಾರು (ಹೆಸರು ವಿಳಾಸ ಸಹಿತ ಮಾಹಿತಿ ನೀಡುವುದು);

ಊ) ಈ ಕಾಮಗಾರಿಯನ್ನು ಪೂರ್ಣಗೊಳಿಸಲು ವಿಳಂಬ ಮಾಡುತ್ತಿರುವ ಗುತ್ತಿಗೆದಾರರನ್ನು ಕಪ್ಪು ಪಟ್ಟಿಗೆ ಸೇರಿಸಿ ಕ್ರಮ ಕೈಗೊಳ್ಳಲಾಗುವುದೆ?

ಶ್ರೀ ಎಸ್. ಸುರೇಶ್ ಕುಮಾರ್ (ನಗರಾಭಿವೃದ್ಧಿ, ಕಾನೂನು ಮತ್ತು ಸಂಸದೀಯ ವ್ಯವಹಾರ ಸಚಿವರು) :

ಅ) ಬಂದಿದೆ.

ಆ) ಕಾಮಗಾರಿಯ ವಿಳಂಬಕ್ಕೆ ಕಾರಣಗಳು:

1) ಜಕ್ಕಲಮಡಗು ಜಲಾಶಯವು ಚಿಕ್ಕಬಳ್ಳಾಪುರ ನಗರ ಸಭೆಯ ವ್ಯಾಪ್ತಿಗೆ ಬರುತ್ತಿದ್ದು, ಚಿಕ್ಕಬಳ್ಳಾಪುರ ಮತ್ತು